**Akashvani: Bangalore**
**Regional Bulletin In Kannada**
**30.04.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.04.2026: 14.30hrs**

*********

**ಮುಖ್ಯಾಂಶಗಳು :**

1. ಬೌರಿಂಗ್ ಆಸ್ಪತ್ರೆ ದುರಂತ ಪ್ರಕರಣ; ಸ್ವಯಂಪ್ರೇರಿತ ಪ್ರಕರಣ ದಾಖಲಿಸಿ ತನಿಖೆಗೆ ಆದೇಶಿಸಿದ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್
2. ರಾಜ್ಯದ ಸರ್ಕಾರಿ ಆಸ್ಪತ್ರೆ ಆವರಣದ ಲೆಕ್ಕ ಪರಿಶೋಧನೆಗೆ ಸರ್ಕಾರ ಆದೇಶ
3. ಬೌರಿಂಗ್ ಆಸ್ಪತ್ರೆ ದುರಂತ ಕುರಿತಂತೆ ನ್ಯಾಯಾಂಗ ತನಿಖೆಗೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹ
4. ಉತ್ತರ ಕನ್ನಡ ಜಿಲ್ಲೆಯ ಬಾವಿಕೇರಿ ವಿದ್ಯುತ್ ಸ್ಥಾವರ ಸ್ಥಾಪನೆಗೆ ಸೂಕ್ತವಲ್ಲ - ಸರ್ಕಾರಕ್ಕೆ ಜಿಲ್ಲಾಡಳಿತ ಪತ್ರ
5. ಬೆಂಗಳೂರು ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಇಂದು ಭಾರೀ ಮಳೆ; ಹವಾಮಾನ ಇಲಾಖೆ ಮುನ್ಸೂಚನೆ

******

ಬೆಂಗಳೂರಿನ ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಕುಸಿದು, ೭ ಜನರು ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್, ಸ್ವಯಂಪ್ರೇರಿತ ಪ್ರಕರಣ ದಾಖಲಿಸಲು ನಿರ್ಧರಿಸಿದ್ದು, ತನಿಖೆಗೆ ಆದೇಶಿಸಿದ್ದಾರೆ. ಇಂದು ಸ್ಥಳಕ್ಕೆ ಭೇಟಿ ನೀಡಿದ ಅವರು, ಘಟನೆ ನಡೆದ ಸ್ಥಳವನ್ನು ಪರಿಶೀಲನೆ ನಡೆಸಿದ್ದಾರೆ. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಲೋಕಾಯುಕ್ತ ನ್ಯಾಯಮೂರ್ತಿಗಳು, ಘಟನೆಗೆ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ ಎಂದು ಹೇಳಿದ್ದಾರೆ. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ ರಾವ್, ಐದು ಪಾಲಿಕೆ ಆಯುಕ್ತರು, ವೈದ್ಯಕೀಯ ಶಿಕ್ಷಣ ಇಲಾಖೆ ಆಯುಕ್ತ, ಅಪರ ಕಾರ್ಯದರ್ಶಿ ಸೇರಿದಂತೆ ಎಲ್ಲರನ್ನು ಆರೋಪಿಗಳನ್ನಾಗಿ ಮಾಡಿ, ಪ್ರಕರಣ ದಾಖಲಿಸಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಕಾಮಗಾರಿಯ ಗುಣಮಟ್ಟದ ಬಗ್ಗೆಯೂ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

******

ಬೆಂಗಳೂರಿನಲ್ಲಿ ಭಾರೀ ಮಳೆಗೆ ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಗೋಡೆ ಕುಸಿದು, ೭ ಜನರು ಸಾವನ್ನಪ್ಪಿದ  ಬಳಿಕ, ರಾಜ್ಯ ಸರ್ಕಾರ ಬೆಂಗಳೂರಿನ ಆಸ್ಪತ್ರೆಗಳ ಮೇಲೆ ವಿಶೇಷ ಗಮನಹರಿಸಿ

ರಾಜ್ಯಾದ್ಯಂತ ಆಸ್ಪತ್ರೆ ಆವರಣದ ಲೆಕ್ಕಪರಿಶೋಧನೆಗೆ ಆದೇಶಿಸಿದೆ. ಇಂದು ಬೌರಿಂಗ್ ಆಸ್ಪತ್ರೆಗೆ ಭೇಟಿ ನೀಡಿದ ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ದುರಂತದ ಸ್ಥಳ ಪರಿಶೀಲಿಸಿ, ಗಾಯಾಳುಗಳನ್ನು ಭೇಟಿ ಮಾಡಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಂದು ವಾರದೊಳಗೆ ವರದಿ ಸಲ್ಲಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆ, ಕೆ.ಸಿ. ಜನರಲ್ ಆಸ್ಪತ್ರೆ, ಸಿ.ವಿ. ರಾಮನ್‌ನಗರ ಆಸ್ಪತ್ರೆ ಸೇರಿದಂತೆ ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಕಾಂಪೌಂಡ್ ಗೋಡೆಗಳು ಮತ್ತು ಕಟ್ಟಡಗಳ ಗುಣಮಟ್ಟದ ಪರಿಶೀಲನೆಗೆ ಆದೇಶಿಸಲಾಗಿದೆ ಎಂದು ತಿಳಿಸಿದ್ದಾರೆ.

******

ಬೆಂಗಳೂರಿನ ಬೌರಿಂಗ್ ಆಸ್ಪತ್ರೆ ದುರಂತದ ಕುರಿತಂತೆ ನ್ಯಾಯಾಂಗ ತನಿಖೆ ನಡೆಸುವಂತೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಪರಿಹಾರ ನೀಡುವಲ್ಲಿ ತಾರತಮ್ಯ ಎಸಗಿದ್ದಾರೆ ಎಂದು ದೂರಿದ್ದಾರೆ. ಈ ಪ್ರಕರಣ ಬೆಂಗಳೂರಿನ ಅವ್ಯವಸ್ಥೆ ಬಗ್ಗೆ ಸರ್ಕಾರಕ್ಕೆ ಎಚ್ಚರಿಕೆಯ ಗಂಟೆಯಾಗಿದೆ ಎಂದು ತಿಳಿಸಿದ್ದಾರೆ. ಇನ್ನಾದರೂ ಸರ್ಕಾರ ಎಚ್ಚೆತ್ತುಕೊಂಡು ಬೆಂಗಳೂರಿನ ಮೂಲಸೌಕರ್ಯವನ್ನು ಸುಧಾರಿಸುವ ಬಗ್ಗೆ ಗಮನಹರಿಸಬೇಕು. ನಗರದಲ್ಲಿ ಮಳೆಯಿಂದ ಉಂಟಾಗುವ ಅನಾಹುತಗಳನ್ನು ತಡೆಗಟ್ಟಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತಕ್ಷಣವೇ ಕೈಗೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ.

******

ವಿವಿಧ ಕಾರ್ಯಕ್ರಮಗಳ ನಿಮಿತ್ತ ರಾಜ್ಯಕ್ಕೆ ಆಗಮಿಸಿರುವ ಕೇಂದ್ರ ವಾರ್ತಾ ಮತ್ತು ಪ್ರಸಾರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ರಾಜ್ಯ ಸಚಿವ ಡಾ.ಎಲ್. ಮುರುಗನ್ ಇಂದು ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮೈಸೂರಿನ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಅಧಿಕಾರಿಗಳು ಉಪಸ್ಥಿತರಿದ್ದರು.

******

ಬೆಂಗಳೂರಿನ ಜವಾಹರಲಾಲ್ ನೆಹರು ತಾರಾಲಯದಲ್ಲಿ ಇಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಬೋಸರಾಜು ಹಾಗೂ ಇಸ್ರೋದ ಮಾಜಿ ಅಧ್ಯಕ್ಷ ಎ.ಎಸ್. ಕಿರಣ್ ಕುಮಾರ್ ನೂತನ ಸ್ಕೈ ಥಿಯೇಟರ್ ಶೋಗೆ ಚಾಲನೆ ನೀಡಿದರು. ವಾಯೇಜರ್ - ಅಂತ್ಯವಿಲ್ಲದ ಪಯಣ ಎಂಬ ೩೨ ನಿಮಿಷಗಳ ಈ ಚಿತ್ರ ವಾಯೇಜರ್ ಯಾನದ ಅದ್ಭುತ ಮತ್ತು ರೋಚಕ ಪಯಣದ ಕತೆಯನ್ನು ತಿಳಿಸಲಿದೆ. ಗುರು, ಶನಿ, ನೆಪ್ಚೂನ್, ಯುರೇನಸ್ ಗ್ರಹಗಳ ನೈಜ ಚಿತ್ರಗಳನ್ನು ಭಿತ್ತರಿಸುವ ಈ ಚಿತ್ರ ಅಲ್ಲಿನ ವಾತಾವರಣ ಮತ್ತು ರಾಸಾಯನಿಕ ಅಂಶಗಳ ಮಾಹಿತಿಯನ್ನು ವಿಶಾಲ ಗುಮ್ಮಟಾಕಾರದ ಪರದೆಯ ಮೇಲೆ ಪ್ರದರ್ಶಿಸಲಿದೆ. ಸಾರ್ವಜನಿಕರು ಹಾಗೂ ವಿಶೇಷವಾಗಿ

ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದುಕೊಳ್ಳಬಹುದಾಗಿದೆ ಎಂದು ಜವಾಹರಲಾಲ್ ನೆಹರು ತಾರಾಲಯದ ನಿರ್ದೇಶಕರಾದ ಡಾ. ಬಿ.ಆರ್. ಗುರುಪ್ರಸಾದ್ ತಿಳಿಸಿದ್ದಾರೆ. ಬೆಳಗ್ಗೆ ೧೦.೩೦, ಸಂಜೆ ೪.೩೦ ಹಾಗೂ ೫.೩೦ಕ್ಕೆ ಇಂಗ್ಲಿಷ್‌ನಲ್ಲಿ, ಬೆಳಗ್ಗೆ ೧೧.೩೦ ಹಾಗೂ ಸಂಜೆ ೩.೩೦ಕ್ಕೆ ಕನ್ನಡದಲ್ಲಿ ಈ ಕಿರುಚಿತ್ರ ಪ್ರಸಾರವಾಗಲಿದೆ.

******

ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಬಾವಿಕೇರಿ ಗ್ರಾಮ ಅಣು ವಿದ್ಯುತ್ ಸ್ಥಾವರ ಸ್ಥಾಪನೆಗೆ ಸೂಕ್ತವಲ್ಲವೆಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಬಾವಿಕೇರಿ ಗ್ರಾಮ ವ್ಯಾಪ್ತಿಯಲ್ಲಿ ಎನ್‌ಟಿಪಿಸಿ ಯೋಜನೆಗೆ ಸಂಬಂಧಿಸಿದಂತೆ ವರದಿ ಸಲ್ಲಿಸಲು ಸರ್ಕಾರ ಜಿಲ್ಲಾಡಳಿತಕ್ಕೆ ನಿರ್ದೇಶನ ನೀಡಿತ್ತು. ಅದರಂತೆ  ಭಾವಿಕೇರಿ ಗ್ರಾಮವು ಪ್ರಸ್ತಾಪಿತ ಭಾರತೀಯ ನೌಕಾಪಡೆ ವಿಮಾನ ನಿಲ್ದಾಣ ಯೋಜನೆಯ ವ್ಯಾಪ್ತಿಗೆ ಒಳಪಟ್ಟಿದ್ದು, ನೌಕಾಪಡೆ ಆವರಣಗಳು ಗ್ರಾಮ ಮಿತಿಯೊಳಗೆ ಬರುತ್ತವೆ. ಈ ಹಿನ್ನೆಲೆಯಲ್ಲಿ ಈ ಪ್ರದೇಶವು ಭದ್ರತಾ ದೃಷ್ಟಿಯಿಂದ ಅತ್ಯಂತ ಸಂವೇದನಾಶೀಲವಾಗಿದೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಕೈಗಾ ಅಣು ವಿದ್ಯುತ್ ಸ್ಥಾವರ ಭಾವಿಕೇರಿ ಗ್ರಾಮದಿಂದ ಸುಮಾರು ೪೫-೫೦ ಕಿ.ಮೀ. ವೈಮಾನಿಕ ದೂರದಲ್ಲಿದೆ. ಭಾವಿಕೇರಿ ಗ್ರಾಮದಲ್ಲಿ ರಾಷ್ಟ್ರೀಯ ಹೆದ್ದಾರಿ ಮತ್ತು ನೌಕಾನೆಲೆ ಯೋಜನೆಗಳಲ್ಲಿ ಭೂಮಿ ಕಳೆದುಕೊಂಡಿರುವ ನಿರಾಶ್ರಿತರು ನೆಲೆಸಿದ್ದು, ಭಾವಿಕೇರಿ ಗ್ರಾಮ ವ್ಯಾಪ್ತಿಯ ಭೂಮಿಯು ಎನ್‌ಟಿಪಿಸಿ ಯೋಜನೆ ಸ್ಥಾಪನೆಗೆ ಸೂಕ್ತವಲ್ಲ ಎಂಬ  ವರದಿಯನ್ನು ಈಗಾಗಲೇ  ಸರ್ಕಾರಕ್ಕೆ ಸಲ್ಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮಿ ಪ್ರಿಯಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

******

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಸದಾಶಿವ ನಗರದಲ್ಲಿರುವ ದಿವಂಗತ ರಾಮಕೃಷ್ಣ ಹೆಗಡೆ ಅವರ ನಿವಾಸಕ್ಕೆ ಭೇಟಿ ನೀಡಿ ರಾಮಕೃಷ್ಣ ಹೆಗಡೆ ಅವರ ಪತ್ನಿ ಶಕುಂತಲಾ ಹೆಗಡೆ ಅವರ ಆರೋಗ್ಯ ವಿಚಾರಿಸಿದರು. ಹೆಗಡೆ ಅವರ ಪುತ್ರಿಯರಾದ ಮಮತಾ, ಸಮತಾ, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ, ಮಾಜಿ ಸಚಿವ ಬಿ.ಎಲ್. ಶಂಕರ್ ಈ ಸಂದರ್ಭದಲ್ಲಿ ಹಾಜರಿದ್ದರು.

******

ರಾಜ್ಯದ ದಕ್ಷಿಣ ಒಳಭಾಗ ಹಾಗೂ ಪಶ್ಚಿಮಘಟ್ಟ ಜಿಲ್ಲೆಗಳು, ಕರಾವಳಿ ಜಿಲ್ಲೆಗಳಲ್ಲಿ ಇನ್ನು ಕೆಲವು ದಿನಗಳ ಕಾಲ ಭಾರೀ ಮಳೆಯಾಗಲಿದೆ ಎಂದು ಚೆನ್ನೈನಲ್ಲಿರುವ ಹವಾಮಾನ ಇಲಾಖೆಯ ಪ್ರಾದೇಶಿಕ ಹವಾಮಾನ ಕೇಂದ್ರ ಮುನ್ಸೂಚನೆ ನೀಡಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಾಮರಾಜನಗರ, ರಾಮನಗರ, ಕೋಲಾರ, ಯಾದಗಿರಿ, ಗದಗ,

ರಾಯಚೂರು, ಬಾಗಲಕೋಟೆ, ಕೊಪ್ಪಳ ಮತ್ತು ಧಾರವಾಡ ಜಿಲ್ಲೆಗಳಿಗೆ ಯಲ್ಲೋ ಅಲರ್ಟ್ ಘೋಷಿಸಲಾಗಿದೆ. ಬಳ್ಳಾರಿ, ಹಾವೇರಿ, ದಾವಣಗೆರೆ, ಕೊಡಗು, ಮೈಸೂರು ಮತ್ತು ಮಂಡ್ಯ ಜಿಲ್ಲೆಗಳಲ್ಲೂ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

******

ಹೊರಗುತ್ತಿಗೆ ರದ್ದುಪಡಿಸಿ ಅರಣ್ಯ ಇಲಾಖೆಯಿಂದಲೇ ವೇತನ ನೀಡುವುದು, ಸೇವಾ ಭದ್ರತೆ ಒದಗಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಅರಣ್ಯ ಇಲಾಖೆಯ ವನ್ಯಜೀವಿ ವಿಭಾಗದ ಹಂಗಾಮಿ ನೌಕರರು ಇಂದು ಬಂಡೀಪುರದ ಸಫಾರಿ ಕೇಂದ್ರದ ಆವರಣದಲ್ಲಿ ಮುಷ್ಕರ ನಡೆಸುತ್ತಿದ್ದಾರೆ. ವನ್ಯಜೀವಿ, ಪ್ರಾದೇಶಿಕ ಸೇರಿದಂತೆ ವಿವಿಧ ವಿಭಾಗಗಳಲ್ಲಿ ಸೇವೆ ಸಲ್ಲಿಸುತ್ತಿರುವ ೪ ಸಾವಿರಕ್ಕೂ ಅಧಿಕ ಹಂಗಾಮಿ ನೌಕರರು ಕಳೆದ ನವೆಂಬರ್‌ನಲ್ಲಿ ಪ್ರತಿಭಟನೆ ನಡೆಸಿದ್ದರು. ಆಗ ನೌಕರರ ಬೇಡಿಕೆಗಳನ್ನು ಈಡೇರಿಸುವ ಭರವಸೆಯನ್ನು ಸರ್ಕಾರ ನೀಡಿತ್ತು. ಆದರೆ, ಇದುವರೆಗೂ ಸರ್ಕಾರದಿಂದ ಸ್ಪಂದನೆ ಸಿಕ್ಕಿಲ್ಲವೆಂದು ಆರೋಪಿಸಿ ಮತ್ತೇ ಮುಷ್ಕರ ಆರಂಭಿಸಿದ್ದಾರೆ.

******

ದಾವಣಗೆರೆಯ ೧೪ ಕೇಂದ್ರಗಳಲ್ಲಿ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ ಮೇ ೩ ರಂದು ನಡೆಯಲಿದ್ದು, ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸಲು ಎಲ್ಲ ಕೇಂದ್ರಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಸೂಚನೆ ನೀಡಿದ್ದಾರೆ. ಬೇಸಿಗೆಯ ತಾಪ ಹೆಚ್ಚಿರುವುದರಿಂದ ಪರೀಕ್ಷೆಯ ಅವಧಿಯಲ್ಲಿ ವಿದ್ಯುತ್ ವ್ಯತ್ಯಯವಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು, ಕುಡಿಯುವ ನೀರು ಹಾಗೂ ಶೌಚಾಲಯದ ವ್ಯವಸ್ಥೆಯಲ್ಲಿ ಲೋಪವಾಗಬಾರದು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಪರೀಕ್ಷೆ ನಡೆಯುವ ದಿನದಂದು ಕೇಂದ್ರದ ಸುತ್ತಮುತ್ತಲ ೨೦೦ ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದ್ದಾರೆ.

******

ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲೂಕಿನ ಬಿಳಿಗಿರಿರಂಗನ ಬೆಟ್ಟದಲ್ಲಿ ಇಂದು ಬ್ರಹ್ಮ ರಥೋತ್ಸವ ನೆರವೇರಿತು. ಸೋಲಿಗರ ಆರಾಧ್ಯ ದೈವ ಬಿಳಿಗಿರಿ ರಂಗನಾಥಸ್ವಾಮಿಯ ಜಾತ್ರೆಗೆ ರಾಜ್ಯ ಹೊರರಾಜ್ಯ ಸೇರಿದಂತೆ ವಿವಿಧೆಡೆಗಳಿಂದ ಭಕ್ತರು ಆಗಮಿಸಿದ್ದರು. ರಥದ ಸುತ್ತ ಮೂರು ಬಾರಿ ಗರುಡ ಪ್ರದಕ್ಷಿಣೆ ಹಾಕಿದ ಬಳಿಕ ರಥೋತ್ಸವ ಆರಂಭಗೊಂಡಿತು. ಈ ಸಂದರ್ಭದಲ್ಲಿ ಭಕ್ತರು ತಾವು ಬೆಳೆದ ಧವಸ- ಧಾನ್ಯಗಳನ್ನು ರಥಕ್ಕೆ ಅರ್ಪಿಸಿದರು.

***END***